ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಅರಣ್ಯ ಇಲಾಖೆ ಕಾಯ್ದೆ ಸೆಕ್ಷನ್ 4 ರಡಿಯಲ್ಲಿನ ಜಮೀನುಗಳ ಬಗ್ಗೆ

ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

585(701) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಮನಗರ ಜಿಲ್ಲಾ ವ್ಯಾಪ್ತಿಯ ಕಂದಾಯ ಇಲಾಖೆಯ ಸಿ ಮತ್ತು ಡಿ ವರ್ಗದ ಯಾವ ಯಾವ ಸರ್ವೇ ನಂ. ಜಮೀನುಗಳನ್ನು ಅರಣ್ಯ ಇಲಾಖೆಗೆ ಹಸ್ತಾಂತರಿಸಲು ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಅಧಿಸೂಚನೆ ಹೊರಡಿಸಲಾಗಿದೆ; (ಗ್ರಾಮವಾರು ವಿವರ ನೀಡುವುದು)

(ಆ) ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಅಧಿಸೂಚನೆ ಹೊರಡಿಸಿದ ನಂತರ ಎಷ್ಟು ಜಮೀನುಗಳನ್ನು ಸೆಕ್ಷನ್ 17 ರಡಿಯಲ್ಲಿ ಅಂತಿಮ ಅಧಿಸೂಚನೆ ಹೊರಡಿಸಿ ಅರಣ್ಯ ಇಲಾಖೆಗೆ ಹಸ್ತಾಂತರಿಸಲಾಗಿದೆ; (ಗ್ರಾಮವಾರು ವಿವರ ನೀಡುವುದು)

(ಇ) ಸಿ ಮತ್ತು ಡಿ ವರ್ಗದ ಜಮೀನುಗಳನ್ನು ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಅಧಿಸೂಚನೆ ಹೊರಡಿಸುವ ಸಂಬಂಧ ಉಪವಿಭಾಗಾಧಿಕಾರಿಗಳನ್ನು ಫಾರೆಸ್ಟ್ ಸೆಟಲ್‌ಮೆಂಟ್ ಅಧಿಕಾರಿಯಾಗಿ ನೇಮಿಸಿದ್ದು, ಉಪವಿಭಾಗಾಧಿಕಾರಿಗಳವರು ಈವರೆವಿಗೂ ವಿಚಾರಣೆ ನಡೆಸಿ ಎಷ್ಟು ಜಮೀನನ್ನು ಅರಣ್ಯ ಕಾಯ್ದೆ ಸೆಕ್ಷನ್ 17 ರಡಿಯಲ್ಲಿ ಅಂತಿಮ ಅಧಿಸೂಚನೆ ಹೊರಡಿಸಲು ತೀರ್ಮಾನಿಸಿರುತ್ತಾರೆ; ಹಾಗೂ ತಿರಸ್ಕರಿಸಲು ತೀರ್ಮಾನಿಸಿರುವ ಜಮೀನು ಎಷ್ಟು;

(ಈ) ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿ ಸುಮಾರು 15 ರಿಂದ 20 ವರ್ಷ ಕಳೆದರೂ ಸೆಕ್ಷನ್ 17 ರಡಿಯಲ್ಲಿ ಅಂತಿಮ ಅಧಿಸೂಚನೆ ಹೊರಡಿಸಿರುವುದಿಲ್ಲವೇಕೆ; ಇಷ್ಟು ದೀರ್ಘ ಕಾಲ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ವಿಳಂಬವಾಗಿರುವ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಸರ್ಕಾರ ತೆಗೆದುಕೊಂಡಿರುವ ನಿಲುವೇನು;

(ಊ) ಈಗಾಗಲೇ ಅರಣ್ಯ ಕಾಯ್ದೆ ಸೆಕ್ಷನ್ 4 ರಡಿಯಲ್ಲಿ ಪ್ರಾಥಮಿಕ ಅಧಿಸೂಚನೆ ಹೊರಡಿಸಿರುವ ಹಲವು ಸರ್ವೇ ನಂ. ಜಮೀನುಗಳು ಅರಣ್ಯ ಲಕ್ಷಣಗಳನ್ನು ಕಳೆದುಕೊಂಡಿದ್ದು, ಸದರಿ ಜಮೀನನ್ನು ಕಂದಾಯ ಇಲಾಖೆಗೆ ವಾಪಸ್ಸು ಪಡೆಯಲು ಸರ್ಕಾರವು ತೀರ್ಮಾನ ಕೈಗೊಳ್ಳುವುದೇ?